ತರಗತಿ : 10ನೇ ತರಗತಿ

ಪಾಠದ ಹೆಸರು : ಭಗತ್‌ಸಿಂಗ್

## ಅ) ಒಂದು ವಾಕ್ಯದಲ್ಲಿ ಉತ್ತರಿಸಿ :

೧. ಜಲಿಯನ್ ವಾಲಾಬಾಗ್ ಹತ್ಯಾಕಾಂಡ ಎಂದು ನಡೆಯಿತು ?

ಉತ್ತರ : ಜಲಿಯನ್ ವಾಲಾಬಾಗ್ ಹತ್ಯಾಕಾಂಡ ಏಪ್ರಿಲ್ ೧೩ , ೧೯೧೯ ರಂದು ನಡೆಯಿತು . ಒಂದು

೨. ಭಗತ್ ಸಿಂಗ್ ತನ್ನ ಸಹೋದರಿಗೆ ಮಣ್ಣು ಯಾವುದರ ಪ್ರತೀಕ ಎಂದು ತೋರಿಸುತ್ತಾನೆ ?

ಉತ್ತರ : ಭಗತ್‌ಸಿಂಗ್ ತನ್ನ ಸಹೋದರಿಗೆ ಮಣ್ಣು ' ತ್ಯಾಗದ ಪ್ರತೀಕ ' ಎಂದು ತೋರಿಸುತ್ತಾನೆ .

೩. ಜಲಿಯನ್ ವಾಲಾಬಾಗ್ ನಲ್ಲಿರುವ ಒಕ್ಕಣೆ ಏನು ?

ಉತ್ತರ : ಜಲಿಯನ್ ವಾಲಾಬಾಗ್‌ನಲ್ಲಿರುವ ಒಕ್ಕಣೆ ಹೀಗಿದೆ : “ಏಪ್ರಿಲ್- ೧೩- ೧೯೧೯ ರಂದು ಬ್ರಿಟೀಷರ ಗುಂಡುಗಳಿಗೆ ಆಹುತಿಯಾದ ಸುಮಾರು ೨೦೦೦ ಮುಗ್ಧ ಹಿಂದೂ, ಸಿಖ್ ಮತ್ತು ಮುಸಲ್ಮಾನರ ಸಮ್ಮಿಳಿತ ರಕ್ತದಿಂದ ಈ ಪ್ರದೇಶ ಪಾವನವಾಗಿದೆ "

೪. ಭಗತ್‌ಸಿಂಗ್‌ನ ಸಹಚರರು ಯಾರು ?

ಉತ್ತರ : ಭಗತ್‌ಸಿಂಗ್‌ನ ಸಹಚರರು ಸುಖ್ ದೇವ್ , ರಾಜ್‌ಗುರು ಹಾಗು ಭಟುಕೇಶ್ವರ ದತ್ತ

೫. ಭಗತ್ ಸಿಂಗ್ ಹುತಾತ್ಮನಾದದ್ದು ಯಾವಾಗ ?

ಉತ್ತರ : ಭಗತ್‌ಸಿಂಗ್ ೨೩ ಮಾರ್ಚ್ ೧೯೩೧ ರಂದು ೨೩ ನೆಯ ವಯಸ್ಸಿನಲ್ಲಿ ಹುತಾತ್ಮನಾದನು .

## ಹೆಚ್ಚುವರಿ ಪ್ರಶ್ನೆಗಳು

೬. ಬಾಲಕ ಭಗತ್‌ಸಿಂಗ್ ಮನಸ್ಸಿನಲ್ಲಿ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹಚ್ಚಿದ ಘಟನೆ ಯಾವುದು ?

ಉತ್ತರ : ಬಾಲಕ ಭಗತ್‌ಸಿಂಗ್ ಮನಸ್ಸಿನಲ್ಲಿ ಜಲಿಯನ್ ವಾಲಾಬಾಗ್ ಘಟನೆ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹಚ್ಚಿತು .

೭. ಜಲಿಯನ್ ವಾಲಾಬಾಗ್ ನಲ್ಲಿ ಸಾವಿರಾರು ಜನರ ಪ್ರಾಣ ಹಾನಿಗೆ ಕಾರಣನಾದ ಬ್ರಿಟಿಷ್ ಅಧಿಕಾರಿ ಯಾರು ?

ಉತ್ತರ : ಜಲಿಯನ್ ವಾಲಾಬಾಗ್‌ನಲ್ಲಿ ಸಾವಿರಾರು ಜನರ ಪ್ರಾಣಹಾನಿಗೆ ಕಾರಣನಾದ ಬ್ರಿಟಿಷ್ ಅಧಿಕಾರಿ ಜನರಲ್ ಡಯರ್

೮. ಗುಂಡಿನ ಮಳೆಗರೆದು ಸಾವಿರಾರು ಜನರ ಪ್ರಾಣ ತೆಗೆದ ನಂತರ ಜನರಲ್ ಡಯರ್ ಏನೆಂದು ಹೇಳಿಕೊಂಡನು ?

KannadaPdf.com

ಉತ್ತರ : ಸಾವಿರಾರು ಜನರ ಪ್ರಾಣ ತೆಗೆದ ನಂತರ ಜನರಲ್ ಡಯರ್ " ಒಂದೇ ಒಂದು ಗುಂಡು ಸಹ ದಂಡವಾಗಲಿಲ್ಲ ಎಂದು ಹೇಳಿಕೊಂಡನು

### ೯. ಬಾಲಕ ಭಗತ್‌ಸಿಂಗ್ ಊಟಮಾಡದೆ ಉಪವಾಸವಿದ್ದುದಕ್ಕೆ ಕಾರಣವೇನು ?

ಉತ್ತರ : ಏಪ್ರಿಲ್ ೧೩ , ೧೯೧೯ ರಂದು ಜಲಿಯನ್ ವಾಲಾಬಾಗ್ ಹತ್ಯಾಕಾಂಡದಲ್ಲಿ ಪ್ರಾಣ ಕಳೆದುಕೊಂಡಿದ್ದವರಿಗೆ ನಮನ ಸಲ್ಲಿಸಲು ಬಾಲಕ ಭಗತ್‌ಸಿಂಗ್ ಹೋಗಿದ್ದನು . ಆಗ ಅಲ್ಲಿದ್ದ ಸ್ವಲ್ಪ ಮಣ್ಣನ್ನು ತೆಗೆದುಕೊಂಡು ಹಣೆಗಿಟ್ಟುಕೊಂಡ . ಇನ್ನಷ್ಟನ್ನು ತನ್ನಲ್ಲಿದ್ದ ಡಬ್ಬಿಯಲ್ಲಿ ಶೇಖರಿಸಿಕೊಂಡು ಹಿಂತಿರುಗಿದ . ಜಲಿಯನ್ ವಾಲಾಬಾಗ್ ಘಟನೆ ಆತನ ಮನಸ್ಸಿನ ಮೇಲೆ ತೀವ್ರವಾದ ಪರಿಣಾಮ ಬೀರಿತ್ತು . ಆದ್ದರಿಂದ ಅವನ ಸಹೋದರಿ ರಾತ್ರಿ ಎಂದಿನಂತೆ ಊಟಕ್ಕೆಬ್ಬಿಸಿದಾಗ ಅವನು ಒಲ್ಲೆನೆಂದು ಮುಖ ತಿರುಗಿಸಿದ

### ೧೦. ಭಗತ್ ಸಿಂಗ್ ಮತ್ತು ಆತನ ಸಹಚರರಿಗೆ ಗಲ್ಲುಶಿಕ್ಷೆಯಾಗಲು ಕಾರಣವೇನು ?

ಉತ್ತರ : ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್ ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ . ಇದರ ಫಲವಾಗಿ ಮರಣ ದಂಡನೆಗೆ ಈಡಾದನು .

KannadaPdf.com